ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೧	ಬೆಂಗಳೂರು, ಶನಿವಾರ, ೦೨, ಮೇ, ೨೦೨೬ (ವೈಶಾಖ, ೧೨, ಶಕವರ್ಷ, ೧೯೪೮)	ಸಂಚಿಕೆ ೮೧
Volume - 161	BENGALURU, SATURDAY, 02, MAY, 2026 (VAISHAKHA , 12, SHAKAVARSHA, 1948)	Issue 81

ಭಾಗ ೨

ನೇಮಕಗಳು, ಸ್ಥಳ ನೇಮಕಗಳು, ವರ್ಗಾವಣೆಗಳು, ರಜೆ ಮತ್ತು ಅಧಿಕಾರಗಳು, ಕರ್ನಾಟಕ ಉಚ್ಚ ನ್ಯಾಯಾಲಯದ ಅಧಿಸೂಚನೆಗಳು

ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ:ಆ–1:30:ಮನವಿ:2024

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನ ಸೌಧ,
ಡಾ. ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು–560 001, **ದಿನಾಂಕ:26.02.2026.**

ಅಧಿಸೂಚನೆ

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ (ನೇಮಕಾತಿ ಹಾಗೂ ಸೇವಾ ಷರತ್ತುಗಳು) ನಿಯಮಗಳು, 2021ರ ನಿಯಮ 6(ii)ರ ಪ್ರಕಾರ ಮಾನ್ಯ ಸಭಾಪತಿಯವರಿಗೆ ಪ್ರದತ್ತವಾಗಿರುವ ಅಧಿಕಾರದ ರೀತ್ಯಾ ಶ್ರೀ ಬಿ. **ಶಿವಮಾದಯ್ಯ, ಚರ್ಚಾ ಸಂಪಾದಕ,** ಇವರಿಗೆ **ಮುಖ್ಯ ಚರ್ಚಾ ಸಂಪಾದಕರ ಹುದ್ದೆಗೆ ಅರ್ಹತಾ ಸೇವಾ ಅವಧಿಯನ್ನು 2 ವರ್ಷ ಎಂದು ಕರ್ನಾಟಕ ವಿಧಾನ ಪರಿಷತ್ತಿನ (ಅಧಿಕಾರಿ ಮತ್ತು ನೌಕರರುಗಳ ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 2021ಕ್ಕೆ ತಿದ್ದುಪಡಿ ತರುವ ಸಂಬಂಧ ಮಾನ್ಯ ವಿಶೇಷ ಮಂಡಳಿಯ ಫಟನೋತ್ತರ ಅನುಮೋದನೆಯನ್ನು ಕಾಯ್ದುರಿಸಿ** ವೇತನ ಶ್ರೇಣಿ ರೂ.**118700–3100–134200–3500–155200–4000–175200**ರಲ್ಲಿ **ಮುಖ್ಯ ಚರ್ಚಾ ಸಂಪಾದಕ ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಸ್ಥಾನಪನ್ನ ಬಡ್ತಿ ನೀಡಿ ನೇಮಕ ಮಾಡಲಾಗಿದೆ.**

ಮಾನ್ಯ ಸಭಾಪತಿಯವರ ಆದೇಶಾನುಸಾರ,

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

PR-05

ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ:ಆ–I:30:ಮನವಿ:2024

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನ ಸೌಧ,
ಡಾ. ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು–560 001, **ದಿನಾಂಕ:26.02.2026**.

ಅಧಿಸೂಚನೆ

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ (ನೇಮಕಾತಿ ಹಾಗೂ ಸೇವಾ ಷರತ್ತುಗಳು) ನಿಯಮಗಳು, 2021ರ ನಿಯಮ 6(ii)ರ ಪ್ರಕಾರ ಮಾನ್ಯ ಸಭಾಪತಿಯವರಿಗೆ ಪ್ರದತ್ತವಾಗಿರುವ ಅಧಿಕಾರದ ರೀತ್ಯಾ **ಶ್ರೀ ಎಂ.ಎಸ್. ಶಿವಸ್ವಾಮಿ, ಸಹಾಯಕ ಚರ್ಚಾ ಸಂಪಾದಕ/ಅಭಿಲೇಖನಾಧಿಕಾರಿ** ಇವರಿಗೆ **(ಶ್ರೀ ಬಿ. ಶಿವಮಾದಯ್ಯ, ಇವರಿಗೆ ಮುಖ್ಯ ಚರ್ಚಾ ಸಂಪಾದಕರ ಹುದ್ದೆಗೆ ಅರ್ಹತಾ ಸೇವಾ ಅವಧಿಯನ್ನು 2 ವರ್ಷ ಎಂದು ಕರ್ನಾಟಕ ವಿಧಾನ ಪರಿಷತ್ತಿನ (ಅಧಿಕಾರಿ ಮತ್ತು ನೌಕರರುಗಳ ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 2021ಕ್ಕೆ ತಿದ್ದುಪಡಿ ತರುವ ಸಂಬಂಧ ಮಾನ್ಯ ವಿಶೇಷ ಮಂಡಳಿಯ ಘಟನೋತ್ತರ ಅನುಮೋದನೆಯನ್ನು ಕಾಯ್ದಿರಿಸಿ ಮುಖ್ಯ ಚರ್ಚಾ ಸಂಪಾದಕರ ಹುದ್ದೆಗೆ ಮುಂಬಡ್ತಿ ನೀಡಿದ್ದರಿಂದ ತೆರವಾದ ಹುದ್ದೆಗೆ)** ವೇತನ ಶ್ರೇಣಿ ರೂ.**83700–1900–85600–2300–99400–2700–115600–3100–134200–3500–155200**ರಲ್ಲಿ **ಚರ್ಚಾ ಸಂಪಾದಕರ ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಸ್ಥಾನಪನ್ನ ಬಡ್ತಿ ನೀಡಿ ನೇಮಕ ಮಾಡಲಾಗಿದೆ.**

ಮಾನ್ಯ ಸಭಾಪತಿಯವರ ಆದೇಶಾನುಸಾರ,

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

PR-06

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಐ 194 ಸಿಓಎಫ್ 2023

ಕರ್ನಾಟಕ ಸರ್ಕಾರ ಸಚಿವಾಲಯ,
ಡಾ.ಬಿ.ಆರ್.ಅಂಬೇಡ್ಕರ್ ವೀಧಿ,
ವಿಕಾಸಸೌಧ,
ಬೆಂಗಳೂರು, ದಿನಾಂಕ:04.03.2026

ಅಧಿಸೂಚನೆ

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಐ 194 ಸಿಓಎಫ್ 2023, ದಿನಾಂಕ:29.02.2024ರಲ್ಲಿ, ಶ್ರೀ ಗಂಗಾಧರ್ ಇವರನ್ನು ದಿ ಮೈಸೂರು ಷುಗರ್ ಕಂಪನಿಯ ಆಡಳಿತ ಮಂಡಳಿಗೆ ನಿರ್ದೇಶಕನ್ನಾಗಿ ಮತ್ತು ಎರಡು ವರ್ಷಗಳವರೆಗೆ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಅಧಿಸೂಚಿಸಲಾಗಿರುತ್ತದೆ. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 100 ಶಿಸನೇ 2025, ದಿನಾಂಕ:27.02.2026ರಲ್ಲಿ ನೀಡಿದ ನಿರ್ದೇಶನದನ್ವಯ, Articles of Association of The Mysore Sugar Company Limited ನ ಕಲಂ 93 & 119 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಗಂಗಾಧರ್, ಅಧ್ಯಕ್ಷರು, ದಿ ಮೈಸೂರು ಷುಗರ್ ಕಂಪನಿ ಲಿ., ಮಂಡ್ಯ ಇವರ ಅಧಿಕಾರಾವಧಿಯನ್ನು ದಿನಾಂಕ:01.03.2026ರಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಮುಂದುವರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪವಿತ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಸಕ್ಕರೆ)

PR-07

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಐ 339 ಸಿಓಎಫ್ 2025 ಕರ್ನಾಟಕ ಸರ್ಕಾರ ಸಚಿವಾಲಯ

ವಿಕಾಸಸೌಧ

ಬೆಂಗಳೂರು, ದಿನಾಂಕ:17.11.2025

ಅಧಿಸೂಚನೆ

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಐ 195 ಸಿಓಎಫ್ 2023, ದಿನಾಂಕ:15.07.2025ರಲ್ಲಿ ಶ್ರೀ ಸಮೀರ್ ಶುಕ್ಲಾ., ಭಾ.ಆ.ಸೇ ಇವರನ್ನು ದಿ ಮೈಸೂರು ಷುಗರ್ ಕಂಪನಿ ಲಿ., ಮಂಡ್ಯ ಇಲ್ಲಿನ ಆಡಳಿತ ಮಂಡಳಿಯ ನಿರ್ದೇಶಕರನ್ನಾಗಿ ನೇಮಿಸಿರುವುದನ್ನು ಈ ಕೂಡಲೇ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ ಹಾಗೂ Articles of Association of The Mysore Sugar Company Limitedನ ಕಲಂ 93 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀಮತಿ ರೋಹಿಣಿ ಸಿಂಧೂರಿ ದಾಸರಿ, ಭಾ.ಆ.ಸೇ. ಸರ್ಕಾರದ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಎಂ.ಎಸ್.ಎಂ.ಇ ಮತ್ತು ಗಣಿ) ಇವರನ್ನು ದಿ ಮೈಸೂರು ಷುಗರ್ ಕಂಪನಿಯ ಆಡಳಿತ ಮಂಡಳಿಗೆ ನಿರ್ದೇಶಕರನ್ನಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಿ ಅಧಿಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಸ್.ಲೀಲಾವತಿ)
ಸರ್ಕಾರದ ಉಪ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಸಕ್ಕರೆ)

PR-08

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 59 ಎಸ್ಎಲ್ಎ 2026 ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಡಾ॥ಬಿ.ಆರ್.ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:09-04-2026.

ಅಧಿಸೂಚನೆ

ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಸದಸ್ಯರಾಗಿ ಸೇವೆ ಸಲ್ಲಿಸುತ್ತಿರುವ ಈ ಕೆಳಕಂಡ ಸದಸ್ಯರುಗಳ ಪದಾವಧಿಯು 2026ನೇ ಸಾಲಿನಲ್ಲಿ ಮುಗಿಯಲಿದೆ. ವಿವರಗಳು ಕೆಳಕಂಡಂತಿವೆ:

ಕ್ರ.ಸಂ.	ಹೆಸರು	ಜನ್ಮ ದಿನಾಂಕ	ಅಧಿಕಾರ ವಹಿಸಿಕೊಂಡ ದಿನಾಂಕ:	ನಿವೃತ್ತಲಾಗಲಿರುವ ದಿನಾಂಕ:
1.	ಶ್ರೀ ಮುಸ್ತಫಾ ಹುಸೇನ್ ಸಯ್ಯದ್ ಅಝೀಜ್	15.06.1964	30.09.2023	14.06.2026
2.	ಡಾ. ಶಾಂತಾ ಹೊಸಮನಿ	07.07.1964	23.06.2021	06.07.2026

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೇಮಲತ ಜಿ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವೆಗಳು-7).

PR-09

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು.

THAMMAIAH